# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಕೇಂದ್ರ ಪುರಸ್ಕೃತ ಯೋಜನೆಯಡಿ ಧಾರವಾಡ ಜಿಲ್ಲೆಗೆ ಮಂಜೂರಾಗಿರುವ 05 ವಿದ್ಯಾರ್ಥಿನಿಲಯಗಳ ಕಟ್ಟಡ ನಿರ್ಮಾಣಕ್ಕೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

**ಓದಲಾಗಿದೆ:-**

1. ಕೇಂದ್ರ ಸರ್ಕಾರದ ಪತ್ರ ಸಂಖ್ಯೆ: 11015/02/2020-ಬಿಸಿ-1, ದಿನಾಂಕ: 23.03.2021.
2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಪ್ರಸ್ತಾವನೆ ಸಂಖ್ಯೆ: ಹಿಂವಕಇ/ವನಿಶಾ/ಸಿಆರ್-118/2018-19, ದಿನಾಂಕ: 31.03.2021.
3. ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 214 ವೆಚ್ಚ-3/2021, ದಿನಾಂಕ: 24.06.2021

******

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ:(1)ರಲ್ಲಿ ಕೇಂದ್ರ ಸರ್ಕಾರವು ಕೇಂದ್ರ ಪುರಸ್ಕೃತ ರಾಜ್ಯ ಯೋಜನೆಯಡಿ 90:10 ರ ಅನುಪಾತದಲ್ಲಿ (ಕೇಂದ್ರದ ಪಾಲು: ರಾಜ್ಯದ ಪಾಲು) ಧಾರವಾಡ ನಗರದಲ್ಲಿ 5 ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯಗಳ ನಿರ್ಮಾಣ ಮಾಡಲು ಮಂಜೂರಾತಿ ನೀಡಿರುತ್ತದೆ ಹಾಗೂ ಕೇಂದ್ರ ಸರ್ಕಾರದ ಪಾಲಿನ ಮೊತ್ತ ರೂ.1350.00 ಲಕ್ಷಗಳನ್ನು ಮಂಜೂರು ಮಾಡಿದ್ದು ಅದರಲ್ಲಿ ಮೊದಲನೇ ಕಂತಿನ ಅನುದಾನ ರೂ.675.00 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(2) ರ ಪ್ರಸ್ತಾವನೆಯಲ್ಲಿ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರು ಧಾರವಾಡ ಜಿಲ್ಲೆಯ 5 ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳಲ್ಲಿ ಪ್ರತಿ ವಿದ್ಯಾರ್ಥಿ ನಿಲಯದ ಮಂಜೂರಾತಿ ಸಂಖ್ಯೆ 100 ಇದ್ದು ಎಲ್ಲಾ ವಿದ್ಯಾರ್ಥಿನಿಯರಿಗೆ ವಾಸ್ತವ್ಯ ಗ್ರಂಥಾಲಯ ಕೊಠಡಿ, ಕಂಪ್ಯೂಟರ್ ಲ್ಯಾಬ್ ಹಾಗೂ ಇತರೆ ಅವಶ್ಯವಿರುವ ಎಲ್ಲಾ ಮೂಲಭೂತ ಸೌಕರ್ಯಗಳನ್ನೊಳಗೊಂಡ ಕಟ್ಟಡವನ್ನು ನಿರ್ಮಿಸುವುದು ಅಗತ್ಯವಾಗಿರುತ್ತದೆ. ಅದರಂತೆ 100 ಸಂಖ್ಯಾಬಲದ ವಿದ್ಯಾರ್ಥಿ ನಿಲಯ ಕಟ್ಟಡ ನಿರ್ಮಾಣಕ್ಕೆ ಕರ್ನಾಟಕ ಗೃಹ ಮಂಡಳಿಯು 2018-19ನೇ ಸಾಲಿನ ಧಾರವಾಡ ವೃತ್ತದ ಎಸ್. ಆರ್. ದರಗಳನ್ವಯ ರೂ.400.00ಲಕ್ಷಗಳ ಅಂದಾಜು ಪಟ್ಟಿಯನ್ನು ಸಿದ್ಧಪಡಿಸಿ ಸಲ್ಲಿಸಿರುತ್ತದೆ. ಕೇಂದ್ರ ಸರ್ಕಾರದ ಮಾರ್ಗಸೂಚಿಯಲ್ಲಿನ ಮಾನದಂಡದನ್ವಯ ಪ್ರತಿ ಕಟ್ಟಡಕ್ಕೆ ಗರಿಷ್ಠ ರೂ.300.00ಲಕ್ಷಗಳ ಅಂದಾಜು ವೆಚ್ಚಕ್ಕೆ ಮಂಜೂರಾತಿ ನೀಡಿದ್ದು, ಬಾಕಿ ಅನುದಾನವನ್ನು ರಾಜ್ಯಸರ್ಕಾರದಿಂದ ಭರಿಸಬೇಕಾಗಿರುತ್ತದೆ ಎಂಬುದಾಗಿ ಅಭಿಪ್ರಾಯಿಸಿ ತಲಾ ರೂ.400.00ಲಕ್ಷಗಳ ಅಂದಾಜು ವೆಚ್ಚಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಿ ಪ್ರತಿ ವಿದ್ಯಾರ್ಥಿ ನಿಲಯದ ಅಂದಾಜಿನ ಶೇ.50ರ ಮೊತ್ತ ರೂ.200.00 ಲಕ್ಷಗಳಂತೆ ಒಟ್ಟು 5 ವಿದ್ಯಾರ್ಥಿ ನಿಲಯಗಳ ಕಟ್ಟಡಕ್ಕೆ ರೂ.1000.00ಲಕ್ಷಗಳನ್ನು ಮೊದಲನೇ ಕಂತಾಗಿ ಬಿಡುಗಡೆ ಮಾಡಲು ಕೋರಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (3)ರ ಆರ್ಥಿಕ ಇಲಾಖೆಯ ಟಿಪ್ಪಣಿಯಲ್ಲಿ "ಕೇಂದ್ರ ಪುರಸ್ಕೃತ ಯೋಜನೆಯಡಿ ಪ್ರತಿ ವಿದ್ಯಾರ್ಥಿ ನಿಲಯಗಳ ಕಟ್ಟಡ ನಿರ್ಮಾಣಕ್ಕೆ ಮಂಜೂರಾಗಿರುವ ಘಟಕ ವೆಚ್ಚ ರೂ.3.00 ಕೋಟಿಯಾಗಿದ್ದು, ಇಲಾಖೆ ಪ್ರಸ್ತಾಪಿಸಿರುವ ಘಟಕ ವೆಚ್ಚ ರೂ.4.00 ಕೋಟಿಗಳಾಗಿರುತ್ತದೆ. ಆದ್ದರಿಂದ, ವಿಶೇಷ ಪ್ರಕರಣವೆಂದು ಪರಿಗಣಿಸಿ, 2020-21ನೇ ಸಾಲಿನ ಕೇಂದ್ರ ಪುರಸ್ಕೃತ ಯೋಜನೆಯಡಿ ಮಂಜೂರಾಗಿರುವ ವಿದ್ಯಾರ್ಥಿ ನಿಲಯಗಳ ಕಟ್ಟಡ ನಿರ್ಮಾಣಕ್ಕೆ ಕೇಂದ್ರ ಸರ್ಕಾರ ಮಂಜೂರು ಮಾಡಿರುವ ಅನುದಾನ ಹೊರತುಪಡಿಸಿ, ಅಗತ್ಯವಿರುವ ಹೆಚ್ಚುವರಿ ಅನುದಾನ ರೂ.5.00ಕೋಟಿಗಳನ್ನು ಒದಗಿಸಲು ಆರ್ಥಿಕ ಇಲಾಖೆ ಸಹಮತಿಸಿದೆ ಹಾಗೂ ಈ ಮೊತ್ತವನ್ನು ಇಲಾಖೆಗೆ ಪ್ರಸಕ್ತ ಸಾಲಿನಲ್ಲಿ ಒದಗಿಸಿರುವ ಅನುದಾನದಲ್ಲಿಯೇ ಭರಿಸುವಂತೆ ಆಡಳಿತ ಇಲಾಖೆಗೆ ತಿಳಿಸಿದೆ.

ಮುಂದುವರೆದು, ಕೇಂದ್ರ ಸರ್ಕಾರ ಬಿಡುಗಡೆ ಮಾಡಿರುವ ಮೊದಲನೇ ಕಂತಿನ ಅನುದಾನವು ರಾಜ್ಯ ಲೆಕ್ಕಶೀರ್ಷಿಕೆ:4225-03-277-7-01ರಡಿ ಲಿಂಕ್ ಆಗಿದ್ದು, 2020-21ನೇ ಸಾಲಿಗೆ ಸದರಿ ಲೆಕ್ಕಶೀರ್ಷಿಕೆಯಡಿ ಯಾವುದೇ ಅನುದಾನ ಒದಗಿಸಿರುವುದಿಲ್ಲವಾದ್ದರಿಂದ ಹಾಗೂ ಹೊಸ ಸೇವೆ ಆಗುವುದರಿಂದ ಸದ್ಯಕ್ಕೆ ಸದರಿ ಲೆಕ್ಕಶೀರ್ಷಿಕೆಯಡಿ ಅನುದಾನ ಬಿಡುಗಡೆ ಮಾಡಲು ಸಾಧ್ಯವಿರುವುದಿಲ್ಲ. ಆದ್ದರಿಂದ ಪೂರಕ ಅಂದಾಜು-1ರ ಸಮಯದಲ್ಲಿ ಕೇಂದ್ರ ಸರ್ಕಾರದ ಅನುದಾನ ಮತ್ತು ರಾಜ್ಯದ ಪಾಲಿನ ಅನುದಾನವನ್ನು ಒದಗಿಸಲಾಗುವುದೆಂದು ಸಹ ತಿಳಿಸಿದೆ " ಎಂದು ತಿಳಿಸಿರುತ್ತದೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಬಿಸಿಡಬ್ಲ್ಯೂ 307 ಬಿಎಂಎಸ್ 2021,**
**ಬೆಂಗಳೂರು, ದಿನಾಂಕ: 02.09.2021.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಕೇಂದ್ರ ಪುರಸ್ಕೃತ ಯೋಜನೆಯಡಿ ಧಾರವಾಡ ನಗರದಲ್ಲಿ ಈ ಕೆಳಕಂಡ 05 ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿ ನಿಲಯಗಳ ಕಟ್ಟಡ ಕಾಮಗಾರಿಗಳನ್ನು ರೂ.400.00ಲಕ್ಷಗಳ ಅಂದಾಜು ವೆಚ್ಚದಲ್ಲಿ ಕರ್ನಾಟಕ ಗೃಹ ಮಂಡಳಿ, ಹುಬ್ಬಳ್ಳಿ ಇವರ ಮುಖಾಂತರ ಕೈಗೊಳ್ಳಲು ಕೆಳಗೆ ನಮೂದಿಸಿರುವ ಷರತ್ತಿಗೊಳಪಟ್ಟು ಸರ್ಕಾರದ ಆಡಳಿತಾತ್ಮಕ ಮಂಜೂರಾತಿ ನೀಡಿ ಆದೇಶಿಸಿದೆ.

| ಕ್ರ. ಸಂ | ವಿದ್ಯಾರ್ಥಿನಿಲಯದ ಹೆಸರು ಮತ್ತು ಸ್ಥಳ | ಹೆಚ್. ಐ.ಸಿ ಸಂಖ್ಯೆ | ಅಂದಾಜು ವೆಚ್ಚ (ರೂ.ಲಕ್ಷಗಳಲ್ಲಿ) |
|---|---|---|---|
| 1 | ಮೆಟ್ರಿಕ್ ನಂತರ ಬಾಲಕಿಯರ ವಿದ್ಯಾರ್ಥಿನಿಲಯ, ಸಪ್ತಾಪುರ, ವನಿತಾ ಸೇವಾ ಸಮಾಜ ಕಟ್ಟಡ, ಧಾರವಾಡ. | BCWD-1953 | 400.00 |
| 2 | ಇಂದಿರಾಗಾಂಧಿ ನರ್ಸಿಂಗ್ ಬಾಲಕಿಯರ ವಿದ್ಯಾರ್ಥಿನಿಲಯ, ಸಪ್ತಾಪುರ, ಕೆ.ಎಂ.ಎಫ್ ಹಿಂಭಾಗ ಕಟ್ಟಡ, ಧಾರವಾಡ | BCWD-1954 | 400.00 |
| 3 | ಮೆಟ್ರಿಕ್ ನಂತರ ಬಾಲಕಿಯರ ವಿದ್ಯಾರ್ಥಿನಿಲಯ, ಸಪ್ತಾಪುರ ಕೆ.ಸಿ.ಡಿ ಆವರಣ ಭಾಗ-2, ಧಾರವಾಡ. | BCWD-1956 | 400.00 |
| 4 | ವಿಭಜಿತ ವೃತ್ತಿಪರ ಮೆಟ್ರಿಕ್ ನಂತರ ಬಾಲಕಿಯರ ವಿದ್ಯಾರ್ಥಿನಿಲಯ, ಸಪ್ತಾಪುರ, ಸಂಕನಗೌಡರ ಕಟ್ಟಡ ಜಯನಗರ, ಧಾರವಾಡ. | BCWD-1957 | 400.00 |
| 5 | ಹೊಸ ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯ, ಸಪ್ತಾಪುರ, ಕಮತರ ಕಟ್ಟಡ, ಶಿವಗಿರಿ, ಧಾರವಾಡ. | BCWD-2570 | 400.00 |

**ಷರತ್ತುಗಳು:-**

1. 2020-21ನೇ ಸಾಲಿನ ಕೇಂದ್ರ ಪುರಸ್ಕೃತ ಯೋಜನೆಯಡಿ ಮಂಜೂರಾಗಿರುವ ವಿದ್ಯಾರ್ಥಿ ನಿಲಯಗಳ ಕಟ್ಟಡ ನಿರ್ಮಾಣಕ್ಕೆ ಕೇಂದ್ರ ಸರ್ಕಾರ ಮಂಜೂರು ಮಾಡಿರುವ ಅನುದಾನ ಹೊರತುಪಡಿಸಿ, ಅಗತ್ಯವಿರುವ ಹೆಚ್ಚುವರಿ ಅನುದಾನ ರೂ.5.00 ಕೋಟಿಗಳನ್ನು ಒದಗಿಸಲು ಆರ್ಥಿಕ ಇಲಾಖೆ ಸಹಮತಿಯಂತೆ ಈ ಮೊತ್ತವನ್ನು ಇಲಾಖೆಗೆ ಪ್ರಸಕ್ತ ಸಾಲಿನಲ್ಲಿ ಒದಗಿಸಿರುವ ಅನುದಾನದಲ್ಲಿಯೇ ಭರಿಸತಕ್ಕದ್ದು.